# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/೩೨೯ /2020-21. ದಿನಾಂಕ : 5/1/2021

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21, ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 02-01-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ವಾರ್ಡ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿ. ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಬೆನಕೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ಎಸ್.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು ಬೆಸ್ಕಾಂ | 9449870535 |
| 4 | ಶ್ರೀ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 5 | ಶ್ರೀ.ಗೋವಿಂದರಾಜುಲು | ಕಂದಾಯ ವಸೂಲಿಗಾರರು | 9900691698 |
| 6 | ಶ್ರೀಹನಮಂತ ವನಚೋಳ್ ರವರ ಪರವಾಗಿ (ಕೆ.ಕೆಂಪಣ್ಣ) | ಜಲ ಪರಿವೀಕ್ಷಕರು (BWSSB) | 9845444087 |
| 7 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 8 | ಶ್ರೀ.ರಾಮ ಐಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 9 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 10 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

ದಿನಾಂಕ: 02-01-2021 ರಂದು ನಡೆದ ವಾರ್ಡ್ -143ರ ಸಮಿತಿ ಸಭೆಯ ನಡಾವಳಿಗಳು:

Scanned by CamScanner

ಮಾನ್ಯ ನೋಡಲ್ ಅಧಿಕಾರಿಗಳ ಅನುಮತಿಯೊಂದಿಗೆ ವಾರ್ಡ್ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ, ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಕನಕಪುರ ರಸ್ತೆಯಲ್ಲಿ ನಾರ್ತ್ ಪಬ್ಲಿಕ್ ಸ್ಕ್ವೇರ್ ರಸ್ತೆ ಮತ್ತು ಹೆಚ್.ಬಿ. ಸಮಾಜ ರಸ್ತೆಗಳ ಮಧ್ಯೆ ಇರುವ ಪಾದಚಾರಿ ಮಾರ್ಗದಲ್ಲಿ ಕಾರುಗಳನ್ನು ನಿಲ್ಲಿಸುವುದರಿಂದ ಸಾರ್ವಜನಿಕರಿಗೆ ಓಡಾಡಲು ಪಾದಚಾರಿ ಮಾರ್ಗವೇ ಇಲ್ಲದಂತಾಗಿದೆ ಎಂದು ತಿಳಿಸಿ ಸದರಿ ಸ್ಥಳದಲ್ಲಿ ಕಾರುಗಳನ್ನು ನಿಲ್ಲಿಸದಂತೆ ಪಾದಚಾರಿ ಮಾರ್ಗದ ಕರ್ಬ್ ಕಲ್ಲುಗಳನ್ನು ಎತ್ತರಿಸಿ ಪಾದಚಾರಿ ಮಾರ್ಗವನ್ನು ಮರು ನಿರ್ಮಾಣ ಮಾಡಬೇಕೆಂದು ಕೋರಿದರು. ಸದರಿ ರಸ್ತೆಯು ಬಿಬಿಎಂಪಿ ಸೆಂಟ್ರಲ್ ಪ್ರಾಜೆಕ್ಟ್ ವ್ಯಾಪ್ತಿಗೆ ಬರುವುದರಿಂದ ಅವರಿಗೆ ಪತ್ರ ಬರೆದು ಈ ಬಗ್ಗೆ ಕ್ರಮವಹಿಸಲು ಕೋರಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡಿ ವಾಸವಿ ಟೆಂಪಲ್ ರಸ್ತೆಯಲ್ಲಿ ನಡೆಯುತ್ತಿರುವ ವೈಟ್ ಟಾಪಿಂಗ್ ಕಾಮಗಾರಿಯ ಜಾಗದಲ್ಲಿ ಮ್ಯಾನ್‌ಹೋಲ್ ಕಟ್ಟಡ ನಿರ್ಮಾಣಕ್ಕಾಗಿ ರಸ್ತೆಯನ್ನು ಅಗೆದು ಬಹಳ ದಿನಗಳಿಂದ ಹಾಗೆಯೇ ಬಿಡಲಾಗಿರುತ್ತದೆ. ಇದರಿಂದಾಗಿ ಅಕ್ಕಪಕ್ಕದಲ್ಲಿನ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆಂದು ತಿಳಿಸಿ,ಅದನ್ನು ಕೂಡಲೇ ನಿರ್ಮಿಸಿಕೊಡಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಕೂಡಲೇ ಕ್ರಮ ವಹಿಸಲು BWSSB ಅಧಿಕಾರಿಗಳಿಗೆ ತಿಳಿಸಲಾಯಿತು. ಈ ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ ಎಂ.ಎಂ.ವಿ.ರಸ್ತೆಗೆ ಡಾಂಬರೀಕರಣ ಕಾಮಗಾರಿಯನ್ನು ಮಾಡಲಾಗಿದ್ದು, ಅದಕ್ಕಾಗಿ ಶ್ರೀ.ವೆಂಕಟೇಶ್ ರವರು ಧನ್ಯವಾದ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ಚರ್ಚಿಸಲಾಗಿದ್ದ ಈ ಕೆಳಕಂಡ ವಿಷಯಗಳನ್ನು ಪ್ರಸ್ತಾಪಿಸಿ ಈ ಬಗ್ಗೆ ಆದಷ್ಟು ಬೇಗ ಕ್ರಮವಹಿಸಲು ಕೋರಿದರು. ಅವುಗಳೆಂದರೆ,

1. ಬಿ.ಎಂ.ಟಿ.ಸಿ. ಬಸ್ ನಿಲ್ದಾಣವನ್ನು ಆರ್.ವಿ. ರಸ್ತೆಯ ಮೆಟ್ರೋ ಸ್ಟೇಷನ್ ಪಕ್ಕದಲ್ಲಿ ನಿರ್ಮಾಣ ಮಾಡುವ ಬಗ್ಗೆ.
2. ಮೆಟ್ರೋ ಸ್ಟೇಷನ್ ಹತ್ತಿರ ಗೋವಿಂದಪ್ಪ ರಸ್ತೆ ಹಾಗು ಹೆಚ್.ಬಿ.ಸಮಾಜ ರಸ್ತೆ ಮಧ್ಯದಲ್ಲಿರುವ ಕನ್ಸರ್‌ವೆನ್ಸಿ ರಸ್ತೆಗೆ ಕಾಂಕ್ರೀಟ್ ಹಾಕಿಸುವ ಬಗ್ಗೆ ಮತ್ತು Rain water harvesting pit ನ ಕವರಿಂಗ್ ಹೊಡೆದು ಹೋಗಿರುವುದನ್ನು ಸರಿಪಡಿಸಲು ಕೋರಿರುವ ಬಗ್ಗೆ.
3. ಶ್ರೀರಾಮ ಮಂದಿರ ರಸ್ತೆಯ ಹಿಂಭಾಗದಲ್ಲಿ ಗೋವಿಂದಪ್ಪ ರಸ್ತೆ ಮತ್ತು ಹೆಚ್.ಬಿ. ಸಮಾಜ ರಸ್ತೆ ಮಧ್ಯೆ ಇರುವ ಕನ್ಸರ್‌ವೆನ್ಸಿಯಲ್ಲಿ ಹಸುಗಳನ್ನು ಕಟ್ಟಿರುವುದನ್ನು ತೆರವುಗೊಳಿಸುವ ಬಗ್ಗೆ.

Scanned by CamScanner

4. ಎಂ.ಎನ್.ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಬೋಲಾರ್ಡ್ಸ್‌ಗಳನ್ನು ಅಳವಡಿಸುವ ಬಗ್ಗೆ.

5. ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದ ಕರ್ಬ್ ಕಲ್ಲುಗಳನ್ನು ಲಾಲ್‌ಬಾಗ್ ವೆಸ್ಟ್‌ಗೇಟ್‌ನಿಂದ ಸರ್ವೇಯರ್ ರಸ್ತೆವರೆಗೆ ಎತ್ತರಿಸುವ ಬಗ್ಗೆ.

6. ಎಂ.ಎನ್. ಕೃಷ್ಣರಾವ್ ರಸ್ತೆಯ ಕೆನರಾ ಬ್ಯಾಂಕ್ ಪಕ್ಕದಲ್ಲಿ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿರುವ ಬಗ್ಗೆ.

7. ಕನಕಪುರ ರಸ್ತೆಯಲ್ಲಿ ವಾಣಿ ವಿಲಾಸ ರಸ್ತೆಯಿಂದ ಮಾಧವರಾವ್ ಸರ್ಕಲ್‌ವರೆಗೆ ವೈಟ್ ಟಾಪಿಂಗ್ ಮಾಡುವ ಬಗ್ಗೆ.

8. ಕೂಲ್ ಕಾರ್ನರ್ ಹಿಂಭಾಗದ ಕನ್ನರ್‌ವೆನ್ಸಿ (ಕೆ.ಆರ್.ರಸ್ತೆ)ಯಲ್ಲಿರುವ ಅನಧಿಕೃತ ಹೋಟೆಲ್ ಅನ್ನು ತೆರವುಗೊಳಿಸುವ ಬಗ್ಗೆ.

9. ಕೆ.ಆರ್.ರಸ್ತೆಯ ಪಾದಚಾರಿ ಮಾರ್ಗದಲ್ಲಿರುವ ನರ್ಸರಿ ಪಾಟರಿ ಶಾಪ್‌ಅನ್ನು ತೆರವುಗೊಳಿಸುವ ಬಗ್ಗೆ.

10. ಕನ್ನರ್‌ವೆನ್ಸಿ ರಸ್ತೆಗಳಲ್ಲಿ ನಿರ್ಮಿಸಿರುವ Rain water harvesting pit ನ್ನು ಮುಚ್ಚದಿರುವ ಬಗ್ಗೆ.

11. ನ್ಯಾಷನಲ್ ಕಾಲೇಜ್ ಹತ್ತಿರ (ಮೆಟ್ರೋ ಪಕ್ಕ) ಇರುವ ಒಣತ್ಯಾಜ್ಯ ನಿರ್ವಹಣೆ ಘಟಕವು ಸರಿಯಾಗಿ ನಿರ್ವಹಣೆಯಾಗದಿರುವ ಬಗ್ಗೆ ಹಾಗೂ ಹಸಿ ಮತ್ತು ಒಣಕಸವನ್ನು ಸರಿಯಾಗಿ ವಿಂಗಡಣೆ ಮಾಡಿ ವಿಲೇವಾರಿ ಮಾಡದಿರುವ ಬಗ್ಗೆ.

12. ಬಸವನಗುಡಿ ಪ್ರದೇಶದಲ್ಲಿ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಅಳವಡಿಸುವ ಬಗ್ಗೆ.

13. ಬಸವನಗುಡಿ ಪ್ರದೇಶದಲ್ಲಿ ಮರಗಳ ಕೊಂಬೆಗಳನ್ನು ತೆಗೆಸುವ ಬಗ್ಗೆ.

14. ಕೆ.ಆರ್. ರಸ್ತೆಯ ಮೀಡಿಯನ್‌ಗಳ ಸೌಂದರ್ಯೀಕರಣ ಕಾಮಗಾರಿ ನಡೆಯುತ್ತಿದ್ದು ಅಲ್ಲಿ ಕರ್ಬ್‌ಕಲ್ಲುಗಳನ್ನು ಎತ್ತರಿಸಲಾಗಿರುತ್ತದೆ ಮತ್ತು ಆ ಜಾಗದಲ್ಲಿ ಗಿಡಗಳನ್ನು ನೆಡಲಾಗಿರುವುದರಿಂದ ಪಾದಚಾರಿಗಳಿಗೆ ರಸ್ತೆಯನ್ನು ದಾಟಲು ತೊಂದರೆಯಾಗುವುದರಿಂದ ಸರಿಯಾದ ವ್ಯವಸ್ಥೆ ಕಲ್ಪಿಸುವ ಬಗ್ಗೆ.

ಕ್ರಮ ಸಂಖ್ಯೆ (1) ಕ್ಕೆ ಸಂಬಂಧಿಸಿದಂತೆ ಬಿ.ಬಿ.ಎಂ.ಪಿ.ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ (TEC) ರವರಿಗೆ ಸೂಕ್ತ ಕ್ರಮವಹಿಸಲು ಪತ್ರ ಬರೆದು ಕೋರಲಾಗುವುದು ಎಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಕ್ರಮ ಸಂಖ್ಯೆ: (2), (9), (10), (12) ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮವಹಿಸಲು ವಾರ್ಡ್‌ನ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

Scanned by CamScanner

ಕ್ರಮ ಸಂಖ್ಯೆ: (3)ಕ್ಕೆ ಸಂಬಂಧಿಸಿದಂತೆ ಬಿ.ಬಿ.ಎಂ.ಪಿ ಪಶುಸಂಗೋಪನಾ ವಿಭಾಗಕ್ಕೆ ಸೂಕ್ತ ಕ್ರಮವಹಿಸಲು ಕೋರಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಕ್ರಮ ಸಂಖ್ಯೆ:(4),(5),(6),(7),ಮತ್ತು (14)ಕ್ಕೆ ಸಂಬಂಧಿಸಿದಂತೆ ಬಿ.ಬಿ.ಎಂ.ಪಿ ಸೆಂಟ್ರಲ್ ಪ್ರಾಜೆಕ್ಟ್ ವಿಭಾಗಕ್ಕೆ ಪತ್ರ ಬರೆದು ಸೂಕ್ತ ಕ್ರಮವಹಿಸಲು ಕೋರಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಕ್ರಮ ಸಂಖ್ಯೆ:(8)ಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮವಹಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.

ಕ್ರಮ ಸಂಖ್ಯೆ:(11)ಕ್ಕೆ ಸಂಬಂಧಿಸಿದಂತೆ, ಸೂಕ್ತ ಕ್ರಮವಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.

ಕ್ರಮ ಸಂಖ್ಯೆ:(13)ಕ್ಕೆ ಸಂಬಂಧಿಸಿದಂತೆ, ಸೂಕ್ತ ಕ್ರಮವಹಿಸಲು ಬಿಬಿಎಂಪಿ ಅರಣ್ಯ ವಿಭಾಗದವರನ್ನು ಕೋರಲಾಗಿವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು ಹಾಗೂ<br>ಸಹಾಯಕ ಅಭಿಯಂತರರು<br>ವಾರ್ಡ್ –143 ವಿ. ವಿ.ಪುರಂ | ನೋಡಲ್ ಅಧಿಕಾರಿಗಳು<br>ವಾರ್ಡ್ ಸಂಖ್ಯೆ: 143 ಹಾಗೂ<br>ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |

Scanned by CamScanner